ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ

**DIRECTORATE OF MEDICAL EDUCATION**

Ananda Rao Circle, Bangalore-9.
Email:dmekarnataka@yahoo.co

ಸಂಖ್ಯೆ: ವೈಶಿ/ಯುಜಿ-ಪಿಜಿ/ಶುಮ/02/2019-20 ದಿನಾಂಕ:08-11-2019

**ಸುತ್ತೋಲೆ**

**ವಿಷಯ:-** 2019-20ನೇ ಸಾಲಿಗೆ ಮೆಟ್ರಿಕ್ ನಂತರದ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (State Scholarship portal for post Matric) ಆನ್‌ಲೈನ್ ಮುಖಾಂತರ ಅರ್ಹ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ನೀಡಲು ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಕರೆದಿರುವ ಬಗ್ಗೆ.

**ಉಲ್ಲೇಖ:-** ಮಾನ್ಯ ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ವೈದ್ಯಕೀಯ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ), ವಿಕಾಸಸೌಧ, ಬೆಂಗಳೂರು ಇವರ ಅ.ಸ.ಪ ಸಂಖ್ಯೆ:ಉಮು/ಉಶಿ.ವೈಶಿ.ಐಟಿ&ಬಿಟಿ.ಬಿ&ತಂ/2019-20, ದಿ: 30.10.2019.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಇಡಿ 11 ಇ-ಆಡಳಿತ 2019, ಬೆಂಗಳೂರು ದಿನಾಂಕ: 29.07.2019.

*****

2019-20ನೇ ಸಾಲಿನಿಂದ ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ರಾಜ್ಯದ ವೈದ್ಯಕೀಯ / ದಂತ ವಿದ್ಯಾಲಯಗಳಿಗೆ ಪ್ರವೇಶ ಪಡೆದು ಎಂಬಿಬಿಎಸ್ / ಬಿಡಿಎಸ್ ಪದವಿ ಹಾಗೂ ಸ್ನಾತಕೋತ್ತರ ವೈದ್ಯಕೀಯ ಮತ್ತು ದಂತ ವಿಜ್ಞಾನ ಡಿಗ್ರಿ / ಡಿಪ್ಲೊಮಾ / ಸೂಪರ್ ಸ್ಪೆಷಾಲಿಟಿ ವ್ಯಾಸಂಗ ಮಾಡುತ್ತಿರುವ ಕುಟುಂಬದ ವಾರ್ಷಿಕ ವರಮಾನ ರೂ. 2.50 ಲಕ್ಷಕ್ಕಿಂತ ಅಧಿಕವಿದ್ದು ರೂ. 10.00 ಲಕ್ಷಗಳ ಮಿತಿಯೊಳಗಿರುವ ಅರ್ಹ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಇ-ಆಡಳಿತ ಇಲಾಖೆಯಿಂದ ಮೆಟ್ರಿಕ್ ನಂತರದ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (State Scholarship portal for post Matric) ವನ್ನು ಅನುಷ್ಠಾನಗೊಳಿಸಿದ್ದು, ಸದರಿ ಪೋರ್ಟಲ್‌ನಲ್ಲಿ ದಿನಾಂಕ: 01/11/2019 ರಿಂದ ಲೋಕಾರ್ಪಣೆ ಮಾಡಿ ದಿನಾಂಕ: 30/11/2019ರವರೆಗೆ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಮಾಡಿಕೊಟ್ಟಿರುತ್ತಾರೆ. ಅದರಂತೆ ಸಂಸ್ಥೆಯವರು ಅರ್ಹ ಇರುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಅರಿವು ಮೂಡಿಸುವುದು ಹಾಗೂ ವಿದ್ಯಾರ್ಥಿಗಳಿಗೆ ಅರ್ಜಿಗಳನ್ನು ಸಲ್ಲಿಸಲು ಸಹಕರಿಸುವುದು.

ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸುವ ಮೊದಲು ಅರ್ಹ ಇರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಮತ್ತು ಸಂಸ್ಥೆಯವರು ಈ ಕೆಳಗೆ ತಿಳಿಸಿರುವಂತೆ ಕ್ರಮ ವಹಿಸಬೇಕಾಗಿರುತ್ತದೆ.

--2